ಕಾಲೇಜು ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
Department of Collegiate Education
Government of Karnataka

ಸಂಖ್ಯೆ: ಕಾಶಿಇ/ಮಾತಂವಿ/27/ಲ್ಯಾಪ್‌ಟಾಪ್/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ: 06.10.2017

**ಅಧಿಕೃತ ಜ್ಞಾಪನಾ** RMP URGENT

ವಿಷಯ : ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ.ಜಾ/ಪ.ಪಂಗಡದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಇ-ಕಂಟೆಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 4 ಹೆಚ್‌ಪಿಸಿ 2017, ಬೆಂಗಳೂರು ದಿ. 18/02/2017, 21/03/2017, 27/03/2017, 24.06.2017

>>><<

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಆದೇಶಗಳನ್ವಯ, ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವ 412 ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ 2016-17ನೇ ಸಾಲಿನಲ್ಲಿ ಪ್ರವೇಶ ಪಡೆದು ವ್ಯಾಸಂಗಮಾಡುತ್ತಿರುವ, ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಅರ್ಹ 26,792 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಾಗೂ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವ ತಾಂತ್ರಿಕ ಶಿಕ್ಷಣ ಕಾಲೇಜುಗಳಲ್ಲಿ 2016-17ನೇ ಸಾಲಿನಲ್ಲಿ ಪ್ರಥಮ ಹಾಗೂ ದ್ವಿತೀಯ ವರ್ಷಕ್ಕೆ ಪ್ರವೇಶ ಪಡೆದು, ಹಾಲಿ 2017-18ನೇ ಸಾಲಿನಲ್ಲಿ ಅನುಕ್ರಮವಾಗಿ ದ್ವಿತೀಯ ಹಾಗೂ ತೃತೀಯ ವರ್ಷಗಳಲ್ಲಿ ಡಿಪ್ಲೊಮಾ ವ್ಯಾಸಂಗ ಮಾಡುತ್ತಿರುವ, ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳಿಗಿಂತ ಕಡಿಮೆ ಇರುವ ಅರ್ಹ 4,000 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಇ-ಕಂಟೆಟ್ ತುಂಬಿಸಿದ ಲ್ಯಾಪ್‌ಟಾಪ್‌ಗಳನ್ನು ಕಲಿಕಾ ಸಾಮಗ್ರಿಯಾಗಿ ಒದಗಿಸುವ ಬಗ್ಗೆ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದ್ದು ಈ ಕಛೇರಿ ಆದೇಶ ಸಂಖ್ಯೆ: DCE/ITS/42/Laptop/2016-17, ದಿನಾಂಕ: 3rd October, 2017 ರನ್ವಯ ಎಲ್-1 ಬಿಡ್‌ದಾರರಾದ Ninerich Infotech, (Consortium partner M/s. Acer India Pvt. Ltd.) ಇವರಿಗೆ ಖರೀದಿ ಆದೇಶವನ್ನು ನೀಡಲಾಗಿರುತ್ತದೆ.

ಸರ್ಕಾರದ ಆದೇಶದನ್ವಯ ಲ್ಯಾಪ್‌ಟಾಪ್‌ಗಳನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ, ಈಗಾಗಲೇ ಗುರುತಿಸಲಾಗಿರುವ ಫಲಾನುಭವಿ ವಿದ್ಯಾರ್ಥಿಗಳಿಗೆ ವಿತರಣೆ ಮಾಡಬೇಕಾಗಿರುತ್ತದೆ. ಅದ್ದರಿಂದ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ/ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಂಶುಪಾಲರುಗಳೊಂದಿಗೆ ಮೇಲುಸ್ತುವಾರಿ ವಹಿಸಿ, ಫಲಾನುಭವಿಗಳಾಗಿ ಗುರುತಿಸಲ್ಪಟ್ಟಿರುವ ಎಸ್.ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಣೆ ಮಾಡಲು ಕ್ರಮ ಕೈಗೊಳ್ಳಲು **ತಮ್ಮ ಕಛೇರಿ ವ್ಯಾಪ್ತಿಯಲ್ಲಿನ ಜಿಲ್ಲಾ ಮಟ್ಟದ ಅಧಿಕಾರಿಯೊಬ್ಬರನ್ನು ನಿಯುಕ್ತಿಗೊಳಿಸುವಂತೆ ಕೋರಲಾಗಿದೆ.**

ಈಗಾಗಲೇ ಲ್ಯಾಪ್‌ಟಾಪ್‌ಗಳನ್ನು ಪಡೆಯಲು ಅರ್ಹರೆಂದು ಗುರುತಿಸಲಾಗಿರುವ ವಿದ್ಯಾರ್ಥಿಗಳ ಆಧಾರ್ ಸಂಖ್ಯೆ/ ಆಧಾರ್ ನೊಂದಣಿ ಸಂಖ್ಯೆಯನ್ನು ಹಾಗೂ ಆಧಾರ್ ಕಾರ್ಡ್/ ಆಧಾರ್ ನೊಂದಣಿ ಪತ್ರದ ಝೆರಾಕ್ಸ್ ಪ್ರತಿಯನ್ನು ಪಡೆಯುವಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಈ ಕಛೇರಿಯ ಸಮಸಂಖ್ಯೆಯ ಸುತ್ತೋಲೆ ದಿನಾಂಕ:05/08/2017ರಲ್ಲಿ ಸೂಚಿಸಲಾಗಿದೆ. ಸದರಿ ಮಾಹಿತಿಗಳೊಂದಿಗೆ ಲ್ಯಾಪ್‌ಟಾಪ್ ಪಡೆಯುತ್ತಿರುವ ಪ್ರತಿ ವಿದ್ಯಾರ್ಥಿಯಿಂದ ಪ್ರತ್ಯೇಕವಾಗಿ ನಿಗದಿತ ನಮೂನೆಯಲ್ಲಿ ವಿವರಗಳನ್ನು ಹಾಗೂ ಅಗತ್ಯ ದಾಖಲಾತಿಗಳನ್ನು ಪಡೆದು ಸಂಗ್ರಹಿಸಿ, ಲ್ಯಾಪ್‌ಟಾಪ್‌ಗಳ ವಿತರಣೆ ಸಮಯದಲ್ಲಿ ಪ್ರತಿ ವಿದ್ಯಾರ್ಥಿಗೆ ವಿತರಿಸುವ ಲ್ಯಾಪ್‌ಟಾಪ್ ಸೀರಿಯಲ್ ಸಂಖ್ಯೆಯನ್ನು ದಾಖಲಿಸಿ, ವಿದ್ಯಾರ್ಥಿಗಳಿಂದ ಸ್ವೀಕೃತಿ ಸಹಿ ಪಡೆದು ಪ್ರಾಂಶುಪಾಲರು ಧೃಢೀಕರಿಸಿ ಸಂಗ್ರಹಿಸಿಟ್ಟುಕೊಳ್ಳುವಂತೆ ಕೂಡಾ ಸೂಚಿಸಲಾಗಿರುತ್ತದೆ.

NO. 1, 2nd Floor, DTE Building, Palace Road, Bangalore - 560 001
Phone: 080 2226 3327, Fax: 080 2228 3758, email: bngcce@kar.nic.in

ಅಕ್ಟೋಬರ್ 2017ರ ಮಾಹೆಯ ಮೂರನೇ ವಾರದಿಂದ ಲ್ಯಾಪ್‌ಟಾಪ್‌ಗಳ ಸರಬರಾಜು ಪ್ರಾರಂಭವಾಗಲಿದ್ದು, ಸರಬರಾಜು ಪ್ರಾರಂಭಕ್ಕೆ ಅಗತ್ಯವಾದ ಎಲ್ಲಾ ಪೂರ್ವಭಾವಿ ತಯಾರಿಗಳನ್ನು ತ್ವರಿತವಾಗಿ ಪೂರೈಸಿಕೊಳ್ಳುವಂತೆ ಕೋರಲಾಗಿದೆ. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಅದ್ಯಕ್ಷತೆಯಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಹೆಚ್ಚಿನ ಮಾಹಿತಿ ನೀಡಲಾಗುವುದು.

Laptop Technical Specifications ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜು/ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಮಾಹಿತಿಗಳನ್ನೊಳಗೊಂಡ ಪಟ್ಟಿಯ ಪ್ರತಿಯನ್ನು ಲಗತ್ತಿಸಿದೆ.

ಕಾಲೇಜು ಶಿಕ್ಷಣ ಆಯುಕ್ತರು

6/10/17

**ಇವರಿಗೆ,**

ಎಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಛೇರಿ, ಕರ್ನಾಟಕ – ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು- ಮಾಹಿತಿಗಾಗಿ
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು- ಮಾಹಿತಿಗಾಗಿ
3. ನಿರ್ದೇಶಕರು, ಉನ್ನತ ಶಿಕ್ಷಣ ಪರಿಷತ್ ಬೆಂಗಳೂರು-ಮಾಹಿತಿಗಾಗಿ
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು- ಮಾಹಿತಿಗಾಗಿ ಮತ್ತು ಲ್ಯಾಪ್‌ಟಾಪ್‌ಗಳ ವಿತರಣೆಗೆ ತಮ್ಮ ವ್ಯಾಪ್ತಿಗೊಳಪಡುವ ಶಿಕ್ಷಣ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಿ ಸರಬರಾಜು ವ್ಯವಸ್ಥೆ ಸುಗಮವಾಗಿ ನಡೆಯುವಂತೆ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.
5. ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ತಮ್ಮ ಜಿಲ್ಲೆಯ ಜಿಲ್ಲಾಧಿಕಾರಿಗಳೊಂದಿಗೆ ಸಂಪರ್ಕಿಸಿ ನಿಯುಕ್ತಿಗೊಳಿಸಲಾಗಿರುವ ಸಮನ್ವಯಾಧಿಕಾರಿಗಳ ಮಾಹಿತಿ ಪಡೆದು ಅವರೊಂದಿಗೆ ಪೂರ್ಣರೀತಿಯಲ್ಲಿ ಸಹಕರಿಸಿ ಗುರುತಿಸಲಾದ ಅರ್ಹ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಯಾವುದೇ ತೊಂದರೆಗಳಿಲ್ಲದೆ ಸುಗಮವಾಗಿ ನಡೆಯುವಂತೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ಈ ಕಛೇರಿಯ ಸುತ್ತೋಲೆ ಸಮಸಂಖ್ಯೆ: ದಿನಾಂಕ:05/08/2017ರಲ್ಲಿ ನೀಡಿರುವ ಸೂಚನೆಗಳನ್ನು ಪಾಲಿಸುವಂತೆ ತಿಳಿಸಲಾಗಿದೆ.
6. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ ಮತ್ತು ಗುಲ್ಬರ್ಗಾ- ಮಾಹಿತಿಗಾಗಿ ಮತ್ತು ತಮ್ಮ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಜಿಲ್ಲಾಧಿಕಾರಿಗಳ ಕಛೇರಿಗಳೊಂದಿಗೆ ಸಂಪರ್ಕದಲ್ಲಿದ್ದು, ಲ್ಯಾಪ್‌ಟಾಪ್ ವಿತರಣಾ ಕಾರ್ಯ ಸುಗಮವಾಗಿರುವಂತೆ ಮೇಲ್ವಿಚಾರಣೆ ನಡೆಸುವಂತೆ ತಿಳಿಸಲಾಗಿದೆ.
7. ಕಾಲೇಜು ಶಿಕ್ಷಣ ಆಯುಕ್ತರ/ನಿರ್ದೇಶಕರ/ಮುಖ್ಯ ಆಡಳಿತಾಧಿಕಾರಿಗಳ/ಹೆಚ್ಚುವರಿ ನಿರ್ದೇಶಕರ ಆಪ್ತ ಶಾಖೆಗೆ- ಮಾಹಿತಿಗಾಗಿ
8. ಕಛೇರಿ ಪ್ರತಿ.